ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ): ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದಲ್ಲಿ ಎಲ್ಲೆಲ್ಲಿ ಪಶು ವೈದ್ಯಕೀಯ ಆಸ್ಪತ್ರೆಗಳಿವೆ?

ಆ) ಮೈಸೂರು ನಗರಕ್ಕೆ ಹೊಸದಾಗಿ ಪಶುವೈದ್ಯಕೀಯ ಆಸ್ಪತ್ರೆಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳೇನು?

ಇ) ಹೊಸ ಪಶುವೈದ್ಯಕೀಯ ಆಸ್ಪತ್ರೆ ಮಂಜೂರು ಮಾಡಬೇಕೆಂದು ಅರ್ಜಿಗಳು ಬಂದಿವೆಯೇ?

ಈ) ಹಾಗಿದ್ದಲ್ಲಿ, ಎಲ್ಲೆಲ್ಲಿ ಹೊಸ ವೈದ್ಯಕೀಯ ಆಸ್ಪತ್ರೆ ಮಂಜೂರು ಮಾಡಬೇಕೆಂದು ಕೋರಿ ಅರ್ಜಿಗಳು ಬಂದಿವೆ? ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ.ಬಿ.ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು):

ಅ) 1. ಧನ್ವಂತ್ರಿ ರಸ್ತೆ.

2. ರಾಜೇಂದ್ರನಗರ

3. ಚಾಮುಂಡಿಪುರಂ

4. ಕುಂಬಾರ ಕೊಪ್ಪಲು

5. ಕನ್ನೇಗೌಡನ ಕೊಪ್ಪಲು

ಆ) 1998-99ನೇ ಸಾಲಿನಲ್ಲಿ ರಾಜ್ಯದಲ್ಲಿ 50 ಪಶು ಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗುತ್ತಿದ್ದು, ಮೈಸೂರು ನಗರದ ಅರ್ಹ ಪಶುಚಿಕಿತ್ಸಾಲಯಗಳನ್ನು ಪಶು ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಪ್ರಸ್ತಾಪಿಸುವಂತೆ ಮೈಸೂರು ಜಿಲ್ಲಾ ಪಂಚಾಯತ್ ಅನ್ನು ಕೋರಲಾಗಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ವಿಷಯ: ಬಿಜಾಪುರದಲ್ಲಿ ಸೈಕಲ್ ಪಟುಗಳಿಗೆ ಪ್ರೋತ್ಸಾಹ

1208 (1653)

ಶ್ರೀ ಶಿವಾನಂದ ಎಸ್.ಪಾಟೀಲ್ (ತಿಕೋಟಾ): ಮಾನ್ಯ ಪ್ರವಾಸೋದ್ಯಮ, ಕನ್ನಡ

ಮತ್ತು ಸಂಸ್ಕೃತಿ ಹಾಗೂ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಬಿಜಾಪುರದಲ್ಲಿ ಸೈಕಲ್ ಪಟುಗಳಿಗೆ ಪ್ರೋತ್ಸಾಹಿಸುವುದಕ್ಕೆ ಅವಶ್ಯಕವಿರುವ ವೆಲೋಡ್ರಮ್, ನಿರ್ಮಾಣ ಮಾಡುವಂತೆ ಈ ಹಿಂದಿನ ಯುವಜನ ಸೇವಾ ಹಾಗೂ ಕ್ರೀಡಾ ಸಚಿವರು ಸದನದಲ್ಲಿ ಭರವಸೆ ನೀಡಿರುವುದು ನಿಜವಲ್ಲವೆ?

ಆ) ಸದರಿ ಭರವಸೆಯನ್ನು ಸರ್ಕಾರಿ ಜಾರಿಗೆ ತರದೇ ಇರಲು ಕಾರಣಗಳೇನು?

ಇ) ಹಾಗಿದ್ದಲ್ಲಿ ಎಂದಿನಿಂದ ನಿರ್ಮಾಣದ ಕಾರ್ಯವನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು?

ಶ್ರೀಮತಿ ಲೀಲಾದೇವಿ ಆರ್. ಪ್ರಸಾದ್ (ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ) ಹೌದು.

ಆ) ರೂ. 14.21 ಲಕ್ಷಗಳ ಅಂದಾಜು ವೆಚ್ಚದಲ್ಲಿ ಬಿಜಾಪುರ ಜಿಲ್ಲಾ ಕ್ರೀಡಾಂಗಣದಲ್ಲಿಯೇ ಸೈಕಲಿಂಗ್ ಟ್ರಾಕ್ (ವಿಲೋಡ್ರಮ್) ಅಳವಡಿಸಲು ಉದ್ದೇಶಿಸಲಾಗಿದೆ. ನಿರೀಕ್ಷಿಸಿದ ಅನುದಾನ ಕೇಂದ್ರ ಸರ್ಕಾರದಿಂದ ಮಂಜೂರಾಗದ ಕಾರಣ ನಿರ್ಮಾಣಕಾರ್ಯ ಕೈಗೆತ್ತಿಕೊಂಡಿರುವುದಿಲ್ಲ.

ಇ) 1998-99ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಧನಸಹಾಯ ಯೋಜನೆ ಅಡಿಯಲ್ಲಿ ಹಣ ಮಂಜೂರಾಗುವ ನಿರೀಕ್ಷೆ ಇದೆ. ಈ ಹಣ ಪಡೆದ ಕೂಡಲೇ ಸೈಕ್ಲಿಂಗ್ ವೆಲೋಡ್ರಮ್ ಕೆಲಸ ಪ್ರಾರಂಭಿಸಲಾಗುವುದು.

ವಿಷಯ: ವಾಣಿಜ್ಯ ತೆರಿಗೆಯ ಬಾಕಿ ವಸೂಲಿ.

1209 (1669)

ಶ್ರೀ ಜಿ.ವಿ.ಶ್ರೀರಾಮ ರೆಡ್ಡಿ (ಬಾಗೇಪಲ್ಲಿ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) 1997-98ನೇ ಸಾಲಿನಲ್ಲಿ ಬಾಕಿ ಇರುವ ವಾಣಿಜ್ಯ ತೆರಿಗೆಯ ಮೊತ್ತವೆಷ್ಟು?

ಆ) ಈ ಬಾಕಿಯನ್ನು (ವಾಣಿಜ್ಯ ತೆರಿಗೆ) ವಸೂಲಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?